# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 467

ಸದಸ್ಯರ ಹೆಸರು : ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 19.08.2026.

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ)</td><td>ಪ್ರಸ್ತುತ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಖಾಲಿ ಇರುವ ಹಾಗೂ ಆರ್ಥಿಕ ಇಲಾಖೆಯಿಂದ ಅನುಮೋದನೆ ಪಡೆದು ನೇಮಕಾತಿಗಾಗಿ ಅಧಿಸೂಚನೆ ಹೊರಡಿಸಲು ನಿರ್ಧರಿಸಿರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ್ ಕಾರ್ಯದರ್ಶಿ ಗ್ರೇಡ್-1, ಗ್ರಾಮ ಪಂಚಾಯತ್ ಕಾರ್ಯದರ್ಶಿ, ಗ್ರೇಡ್-2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗಳ ಸಂಖ್ಯೆ ಎಷ್ಟು; ಕಲ್ಯಾಣ ಕರ್ನಾಟಕ ಮತ್ತು ಉಳಿಕೆ ಮೂಲ ವೃಂದದಲ್ಲಿ ಖಾಲಿ ಇರುವ ನೇಮಕಾತಿಗಾಗಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು;</td><td rowspan="2">ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಈ ಕೆಳಕಂಡ ವೃಂದಗಳಲ್ಲಿ ಖಾಲಿ ಇರುವ ಹುದ್ದೆಗಳ ನೇಮಕಾತಿಗಾಗಿ ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 341 ವೆಚ್ಚ-6 2021, ದಿನಾಂಕ:30-07-2021 ಮತ್ತು ದಿನಾಂಕ: 23-03-2023ರಲ್ಲಿ ಸಹಮತಿ ನೀಡಿರುವಂತೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ನೇಮಕಾತಿ ಪ್ರಕ್ರಿಯೆ ನಡೆಸಲು ನಿರ್ಧರಿಸಿರುವ ವೃಂದವಾರು ಹುದ್ದೆಗಳ ವಿವರವನ್ನು ಈ ಕೆಳಕಂಡ ಕೋಷ್ಟಕದಲ್ಲಿರಿಸಿದೆ.
<table>
<tr><th rowspan="2">ಕ್ರ ಸಂ</th><th rowspan="2">ವೃಂದ</th><th colspan="3">ಖಾಲಿ ಹುದ್ದೆಗಳ ವಿವರ</th><th colspan="3">ಖಾಲಿ ಇರುವ ಹುದ್ದೆಗಳ ಪೈಕಿ ನೇರ ನೇಮಕಾತಿಗಾಗಿ ಪ್ರಸ್ತಾವನೆ ಸಲ್ಲಿಸಿರುವ ಸಂಖ್ಯೆ</th></tr>
<tr><th>ಉಳಿಕೆ ಮೂಲ ವೃಂದ</th><th>ಕಲ್ಯಾಣ ಕರ್ನಾಟಕ ವೃಂದ</th><th>ಒಟ್ಟು</th><th>ಉಳಿಕೆ ಮೂಲ ವೃಂದ</th><th>ಕಲ್ಯಾಣ ಕರ್ನಾಟಕ ವೃಂದ</th><th>ಒಟ್ಟು</th></tr>
<tr><td>01</td><td>ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ (ಗ್ರೇಡ್-I)</td><td>397</td><td>80</td><td>477</td><td>135</td><td>49</td><td>184</td></tr>
<tr><td>02</td><td>ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ (ಗ್ರೇಡ್-II)</td><td>364</td><td>52</td><td>416</td><td>284</td><td>38</td><td>322</td></tr>
<tr><td>03</td><td>ದ್ವಿತೀಯ ದರ್ಜೆ ಲೆಕ್ಕ ಸಹಾಯಕ</td><td>123</td><td>40</td><td>163</td><td>68</td><td>25</td><td>93</td></tr>
</table>
ಕರ್ನಾಟಕ ಲೋಕ ಸೇವಾ ಆಯೋಗದಿಂದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೃಂದದ ನೇರ ನೇಮಕಾತಿ ಕೋಟಾದಡಿ ಉಳಿಕೆ ಮೂಲ ವೃಂದದ 150 ಹುದ್ದೆಗಳಿಗೆ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದ್ದು,</td></tr>
<tr><td>(ಆ)</td><td>ಈ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗುತ್ತಿದೆಯೇ; ಆಗಿದ್ದಲ್ಲಿ ಯಾವ ಯಾವ ಹುದ್ದೆಗಳು ಎಷ್ಟು ಹುದ್ದೆಗಳ ನೇಮಕಾತಿಗಾಗಿ ಪ್ರಾಸ್ತಾವನೆಯನ್ನು ಸಲ್ಲಿಸಲಾಗುತ್ತಿದೆ; (ವಿವರ ನೀಡುವುದು)</td></tr>
</table>

<table>
<tr>
<td></td>
<td></td>
<td>ಆಯ್ಕೆಗೊಂಡ ಅಭ್ಯರ್ಥಿಗಳ ದಾಖಲಾತಿಗಳ ಪರಿಶೀಲನೆ ನಡೆಸಲಾಗುತ್ತಿದೆ. ಹಾಗೂ ಕಲ್ಯಾಣ ಕರ್ನಾಟಕ ವೃಂದದ 97 ಹುದ್ದೆಗಳಿಗೆ ಕರ್ನಾಟಕ ಲೋಕ ಸೇವಾ ಆಯೋಗದಿಂದ ಹೊರಡಿಸಿರುವ ಅಂತಿಮ ಆಯ್ಕೆ ಪಟ್ಟಿಯ ಪೈಕಿ 76 ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲಾಗಿದ್ದು, ಈ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ತರಬೇತಿಯಲ್ಲಿ ಇರುತ್ತಾರೆ.<br><br>ಮೇಲ್ಕಂಡಂತೆ ಖಾಲಿ ಇರುವ ಹುದ್ದೆಗಳ ನೇಮಕಾತಿಗಾಗಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ.</td>
</tr>
<tr>
<td>(ಇ)</td>
<td>ಯಾವ ಕಾಲಮಿತಿಯಲ್ಲಿ ಈ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು;</td>
<td>ಕಲ್ಯಾಣ ಕರ್ನಾಟಕ ವೃಂದದ 97 ಹುದ್ದೆಗಳಿಗೆ ಕರ್ನಾಟಕ ಲೋಕ ಸೇವಾ ಆಯೋಗದಿಂದ ನೇಮಕಾತಿ ಪ್ರಕ್ರಿಯೆ ಕೈಗೊಂಡಿದ್ದು, ದಿನಾಂಕ:20-02-2026ರಂದು ಹೊರಡಿಸಿರುವ ಅಂತಿಮ ಆಯ್ಕೆ ಪಟ್ಟಿಯಲ್ಲಿನ ಅಭ್ಯರ್ಥಿಗಳ ಪೈಕಿ 76 ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲಾಗಿದ್ದು, ಈ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ತರಬೇತಿಯಲ್ಲಿ ಇರುತ್ತಾರೆ.<br><br>ಗ್ರಾಮ ಪಂಚಾಯಿತಿಗಳಲ್ಲಿ ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ (ಗ್ರೇಡ್-I), ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ (ಗ್ರೇಡ್-II) ಹಾಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದಗಳ ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ದಿನಾಂಕ: 24-07-2026 ರಂದು ಕರ್ನಾಟಕ ಪರೀಕ್ಷಾ ಪ್ರಾಧಿಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ. ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ನೇಮಕಾತಿ ಅಧಿಸೂಚನೆ ಹೊರಡಿಸಲಾಗುವುದು.</td>
</tr>
<tr>
<td>(ಈ)</td>
<td>ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಯಾವ ಯಾವ ಹುದ್ದೆಗಳ ನೇಮಕಾತಿಗಾಗಿ ಆರ್ಥಿಕ ಇಲಾಖೆಯು ಅನುಮೋದನೆ ನೀಡಿದೆ. ಈ ಕುರಿತು ಮಾಹಿತಿಯನ್ನು ಒದಗಿಸುವುದು?</td>
<td>ನೇರ ನೇಮಕಾತಿಗಾಗಿ 2021 ಮತ್ತು 2023 ರಲ್ಲಿ ಆರ್ಥಿಕ ಇಲಾಖೆ ಅನುಮೋದನೆ ನೀಡಿರುವ ಹುದ್ದೆಗಳ ವಿವರ ಈ ಕೆಳಕಂಡಂತಿದೆ.
<table>
<tr><th>ಕ್ರ. ಸಂ.</th><th>ವೃಂದ</th><th>ಆರ್ಥಿಕ ಇಲಾಖೆಯಿಂದ ಅನುಮೋದನೆ ಪಡೆದ ಹುದ್ದೆಗಳ ಸಂಖ್ಯೆ</th></tr>
<tr><td>01</td><td>ಪಂಚಾಯಿತಿ ಅಭಿವೃದ್ಧಿ ಅಧಿಕಾರಿ</td><td>150</td></tr>
<tr><td>02</td><td>ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ (ಗ್ರೇಡ್-I)</td><td>135</td></tr>
<tr><td>03</td><td>ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಮತ್ತು ಗ್ರಾಮೀಣಾಭಿವೃದ್ಧಿ ಸಹಾಯಕ (ಗ್ರೇಡ್-II)</td><td>343</td></tr>
<tr><td>04</td><td>ದ್ವಿತೀಯ ದರ್ಜೆ ಲೆಕ್ಕ ಸಹಾಯಕ</td><td>158</td></tr>
<tr><td>05</td><td>ಪ್ರಥಮ ದರ್ಜೆ ಸಹಾಯಕರು</td><td>100</td></tr>
<tr><td>06</td><td>ದ್ವಿತೀಯ ದರ್ಜೆ ಸಹಾಯಕರು</td><td>200</td></tr>
</table>
</td>
</tr>
</table>

ಸಂಖ್ಯೆ: ಗ್ರಾಅಪ 772 ಗ್ರಾಪಂಅ 2026

(ಈಶ್ವರ ಬಿ. ಖಂಡ್ರೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.